**ದಿನಾಂಕಃ 04.08.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ವಾದಿ ಪರ ವಕೀಲರಿಂದಃ**

ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣಪತ್ರದ ಮುಖಾಂತರ ಸಲ್ಲಿಸಿದ್ದು, ಅದರಲ್ಲಿ ಬರೆದಿರುವ ವಿಚಾರಗಳೆಲ್ಲ ಸತ್ಯವಾಗಿದೆ, ಅದರಲ್ಲಿರುವ ವಿಚಾರವನ್ನು ನಾನೇ ಹೇಳಿ ಬರೆಸಿರುತ್ತೇನೆ ಹಾಗೂ ಸಹಿಯು ನನ್ನದಾಗಿರುತ್ತದೆ. ಹಾಜರುಪಡಿಸಿದ ದಾಖಲಾತಿಗಳನ್ನು ಈ ಕೆಳಗಿನಂತೆ ಗುರುತಿಸಲಾಗಿರುತ್ತದೆ.

ಆಫರ್ ಲೆಟರ್ ನ್ನು **ನಿಪಿ-1** ಎಂದು, ಆಧಾರ್ ಕಾರ್ಡ್, ಪಾನ್ ಕಾರ್ಡ್ ಮತ್ತು ಪಾಸ್ ಪೋರ್ಟ್ ನ ನೋಟರೈಸ್ಡ್ ಪ್ರತಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು **ನಿಪಿ-2 ರಿಂದ ನಿಪಿ-5** ಎಂದು, ಮ್ಯಾರೇಜ್ ಸರ್ಟಿಫಿಕೇಟ್ ನ್ನು **ನಿಪಿ-6** ಎಂದು, ಕೆ ಎಸ್ ಎನ್ ಸಿ ಸರ್ಟಿಫಿಕೇಟ್ ನ್ನು **ನಿಪಿ-7** ಎಂದು, ಡಿಗ್ರಿ ಸರ್ಟಿಫಿಕೇಟ್, ಎಸ್ ಎಸ್ ಎಲ್ ಸಿ ಅಂಕಪಟ್ಟಿಗಳ ಜೆರಾಕ್ಸ್ ಪ್ರತಿಗಳನ್ನು ಮೂಲ ಪ್ರತಿಗಳ ಜೊತೆ ಹಾಜರುಪಡಿಸಿದ್ದು ಪ್ರತಿಗಳನ್ನು **ನಿಪಿ-8 ಮತ್ತು ನಿಪಿ-9** ಎಂದು ಗುರುತಿಸಿ ಮೂಲ ದಾಖಲಾತಿಯನ್ನು ಸಾಕ್ಷಿಗೆ ವಾಪಸ್ಸು ನೀಡಲಾಯಿತು. ಇ-ಮೇಲ್ ಕಾಪಿಯನ್ನು **ನಿಪಿ-10** ಎಂದು ಗುರುತಿಸಲಾಯಿತು.

**ಪ್ರತಿವಾದಿ ಮತ್ತು ಪ್ರತಿವಾದಿ ಪರ ವಕೀಲರು ಗೈರು ಹಾಜರಿದ್ದು ಪಾಟೀ ಸವಾಲನ್ನು ಇಲ್ಲ ಎಂದು ತೆಗೆದುಕೊಳ್ಳಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಗಿದೆ )

ಓ.ಹೇ.ಕೇ. ಸರಿ.ಇದೆ.

**(ಶಾಂತಣ್ಣ ಎಂ.ಆಳ್ವ)**
31 ನೇ ಅಪರ ನಗರ ಸಿವಿಲ್ ಮತ್ತು
ಸತ್ರ ನ್ಯಾಯಾಧೀಶರು, ಬೆಂಗಳೂರು.